**<u>ದಿನಾಂಕಃ 28.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ನಕ್ಷೆಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಐಎಮ್‌ವಿ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 5** ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು **ನಿಪಿ 6** ಎಂದು, ಡಿಸ್ಚಾರ್ಜ್ ಸಮರಿಯ ದೃಢೀಕೃತ ಪ್ರತಿಯನ್ನು **ನಿಪಿ 7** ಎಂದು, ಮೋಟಾರು ವಾಹನ ಕಯ್ದೆಯ ಕಲಂ 133 ರಡಿ ನೀಡಿರುವ ನೋಟೀಸು ಮತ್ತು ಸದರಿ ನೋಟೀಸಿಗೆ ನೀಡಿರುವ ಉತ್ತರದ ದೃಢೀಕೃತ ಪ್ರತಿಗಳನ್ನು ಕ್ರಮವಾಗಿ **ನಿಪಿ 8 ಮತ್ತು 9** ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 10** ಎಂದು, ಮೆಡಿಕಲ್ ಬಿಲ್ಲುಗಳನ್ನು **ನಿಪಿ 11** ಎಂದು, ವೈದ್ಯರ ಸಲಹಾ ಚೀಟಿಗಳನ್ನು **ನಿಪಿ 12** ಎಂದು, ಮುಂಗಡ ಪಾವತಿ ರಶೀದಿಗಳನ್ನು **ನಿಪಿ 13** ಎಂದು, ಆಧಾರ್ ಕಾರ್ಡಿನ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಯನ್ನು **ನಿಪಿ 14** ಎಂದು ಗುರುತಿಸಲಾಯಿತು.

1ನೇ ಎದುರುದಾರರ ಪರ ಮಾನ್ಯ ವಕೀಲರು ಪ್ರತಿವಾದ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಪಾಟೀ ಸವಾಲುಃ 2ನೇ ಎದುದಾರರ ಪರ ಮಾನ್ಯ ವಕೀಲರಿಂದ.</u>**

ಅಪಘಾತವಾದ ನಂತರ ಸುಮಾರು ಒಂದು ವರ್ಷದ ವರೆಗೆ ಅರ್ಜಿಯ ಶೀರ್ಷಿಕೆಯಲ್ಲಿ ನೀಡಿರುವ ವಿಳಾಸದಲ್ಲಿ ವಾಸವಾಗಿದ್ದೇನೆ. ನಾನು ಬೆಂಗಳೂರಿನ ಯಲಹಂಕದಲ್ಲಿ ವಾಸವಾಗಿರುತ್ತೇನೆ.

ಆ ಬಗ್ಗೆ ದಾಖಲಾತಿಯನ್ನು ಹೊಂದಿದ್ದು, ಅವುಗಳನ್ನು ಹಾಜರುಪಡಿಸಿಲ್ಲ. ನಾನು ದ್ವಿತಿಯ ಪಿಯುಸಿ ವರೆಗೆ ವ್ಯಾಸಂಗ ಮಾಡಿರುತ್ತೇನೆ.

ಆ ದಿನ ನಾನು ಹೋಗುತ್ತಿದ್ದ ದ್ವಿಚಕ್ರ ವಾಹನವನ್ನು ಸಂತೋಷ್ ಚಾಲನೆ ಮಾಡುತ್ತಿದ್ದು, ಸದರಿ ವಾಹನ ಆತನಿಗೆ ಸೇರಿದ್ದು. ಸದರಿ ವಾಹನಕ್ಕೆ ಸಂಬಂಧಪಟ್ಟ ದಾಖಲಾತಿಗಳನ್ನು ಹಾಜರುಪಡಿಸಿಲ್ಲ. ಸಂತೋಷ್ ಗೆ ಚಾಲನಾ ಪರವಾನಗಿ ಇದ್ದು, ನಾನು ಅದನ್ನು ನೋಡಿರುತ್ತೇನೆ, ಆದರೆ ಅದನ್ನು ಹಾಜರುಪಡಿಸಿಲ್ಲ. ನಾನು ಹೋಗುತ್ತಿದ್ದ ದ್ವಿಚಕ್ರ ವಾಹನಕ್ಕೆ ವಿಮೆ ಇರಲಿಲ್ಲ ಮತ್ತು ಚಾಲಕನಿಗೆ ಪರವಾನಗಿ ಇರಲಿಲ್ಲ ಎಂದರೆ ಸರಿಯಲ್ಲ.

ಸಂತೋಷ್ ನನ್ನ ಬಳಿ ಕೆಲಸ ಮಾಡುತ್ತಿದ್ದ. ನನ್ನ ಅರ್ಜಿಯಲ್ಲಿ ಮತ್ತು ಪ್ರಮಾಣ ಪತ್ರದಲ್ಲಿ ನೀರಾ ತೆಗೆದುಕೊಳ್ಳಲು ಹೋಗುತ್ತಿದ್ದ ಬಗ್ಗೆ ತಿಳಿಸಿದ್ದು, ಸದರಿ ದ್ರವ್ಯದ ಅವಶ್ಯಕತೆ ನನ್ನ ಸ್ಟುಡಿಯೋ ಗೆ ಸಂಬಂಧಪಟ್ಟಂತೆ ಇರುವುದಿಲ್ಲ. ಅಪಘಾತವಾಗುವ ಸುಮಾರು ಒಂದು ತಿಂಗಳ ಪೂರ್ವದಿಂದ ಸಂತೋಷ್ ನನ್ನ ಬಳಿ ಕೆಲಸ ಮಾಡುತ್ತಿದ್ದ. ಸಂತೋಷ್ ಮತ್ತು ನನ್ನ ನಡುವೆ ಮಾಲೀಕ ಮತ್ತು ನೌಕರರ ಸಂಬಂಧ ಇರಲಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ ದಿನಾಂಕದಂದು ಬೆಳಿಗ್ಗೆ ಸುಮಾರು 7.30-8.30 ಗಂಟೆಗೆ ಹಿಂದೂಪುರ ತಲುಪಿರುತ್ತೇವೆ. ಪೊಲೀಸರು ನೀರಾ ಅಮಾನತ್ತುಪಡಿಸಿಕೊಂಡಿಲ್ಲ ಮತ್ತು ಸಂಬಂಧಪಟ್ಟ ದಾಖಲಾತಿಗಳಲ್ಲಿ ಸದರಿ ದ್ರವ್ಯದ ಬಗ್ಗೆ ಯಾವುದೇ ನಮೂದು ಮಾಡಿಲ್ಲ ಎಂದರೆ ಆ ಬಗ್ಗೆ ನನಗೆ ಗೊತ್ತಿಲ್ಲ. ಸಂತೋಷ್ ಮತ್ತು ನಾನು ನೀರಾ ಸೇವಿಸಿದ್ದು, ಅದರ ಅಮಲಿನ ಪರಿಣಾಮ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಅಪಘಾತ ಬೆಳಿಗ್ಗೆ 9.30-9.45 ಗಂಟೆಯ ನಡುವಿನ ಅವಧಿಯಲ್ಲಿ ಸಂಭವಿಸಿರುತ್ತದೆ. ಅಪಘಾತವಾಗುವ ಮೊದಲು ಸುಮಾರು 5 ಮೀಟರ್ ಅಂತರದಲ್ಲಿ ಆಪಾದಿತ ಲಾರಿಯನ್ನು ನೋಡಿರುತ್ತೇನೆ. ನಮ್ಮ ವಾಹನ ಮತ್ತು ಆಪಾದಿತ ಲಾರಿಯ ನಡುವೆ ಬೇರೆ ಯಾವುದೇ ವಾಹನಗಳು

ಇರಲಿಲ್ಲ, ಆದರೆ ಅಕ್ಕಪಕ್ಕದಲ್ಲಿ ಚಲಿಸುತ್ತಿದ್ದವು. ಅಪಘಾತವಾದ ರಸ್ತೆ ದ್ವಿಮುಖ ಸಂಚಾರ ವ್ಯವಸ್ಥೆ ಇರುವ ರಸ್ತೆ ಎಂದರೆ ಸರಿಯಲ್ಲ. ಸಂತೋಷ್ ರವರು ನೀರಾ ಸೇವನೆ ಮಾಡಿ ಅಮಲಿನಲ್ಲಿ ಚಾಲನೆ ಮಾಡುತ್ತಿದ್ದ ಪರಿಣಾಮ ನಿಯಂತ್ರಣ ತಪ್ಪಿ ಆತನ ಅಜಾಗರೂಕತೆಯಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ.

ನಾನು ಸುಮಾರು 8-9 ದಿನಗಳ ಕಾಲ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ದಾಖಲಾಗಿದ್ದೆನು. ಆ ಸಂದರ್ಭದಲ್ಲಿ ಪೊಲೀಸರು ಆಸ್ಪತ್ರೆಗೆ ಬಂದಿದ್ದ ಬಗ್ಗೆ ನನಗೆ ನೆನಪಿಲ್ಲ. ಕ್ರಿಮಿನಲ್ ಪ್ರಕರಣದ ಬಗ್ಗೆ ನನಗೆ ಗೊತ್ತಿಲ್ಲ. ನಾನು ಮುಂದುವರೆದ ಚಿಕಿತ್ಸೆಯನ್ನು ಪಡೆದಿರುತ್ತೇನೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಚಿಕಿತ್ಸೆಗೆ ನಾನು ಹೇಳಿರುವಷ್ಟು ಹಣವನ್ನು ವ್ಯಯಿಸಿಲ್ಲ ಮತ್ತು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ನಾನು ಅಂಗಡಿ ನಡೆಸುತ್ತಿರುವ ಬಗ್ಗೆ ಯಾವುದೇ ಪರವಾನಗಿ ಪಡೆದಿಲ್ಲ. ನನ್ನ ಕೆಲಸ ಮತ್ತು ಆದಾಯಕ್ಕೆ ಸಂಬಂಧಪಟ್ಟಂತೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ನನಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ಮುಂದುವರೆದ ಚಿಕಿತ್ಸೆಗೆ ನಾನು ಹೇಳಿರುವಷ್ಟು ಹಣ ಬೇಕಾಗಿಲ್ಲ ಮತ್ತು ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಈಗ ಯಾವುದೇ ಕೆಲಸ ಮಾಡುತ್ತಿಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳು ವಾಸಿಯಾಗಿವೆ ಎಂದರೆ ಸರಿಯಲ್ಲ. ನಾನು ಈಗ ಮೊದಲಿನಂತೆ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಯಾವುದೇ ಆರ್ಥಿಕ ನಷ್ಟ ಉಂಟಾಗಿಲ್ಲ ಎಂದರೆ ಸರಿಯಲ್ಲ.

ಸಂತೋಷ್ ರವರ ತಪ್ಪಿ ನಿಂದ ಅಪಘಾತ ಆಗಿದೆಯೇ ಹೊರತು ಆಪಾದಿತ ಲಾರಿ ಚಾಲಕನ ತಪ್ಪಿನಿಂದ ಅಲ್ಲ ಎಂದರೆ ಸರಿಯಲ್ಲ. ಅಪಘಾತದ ಬಗ್ಗೆ ನಾನು ಹೇಳಿಕೆ ನೀಡಿರುತ್ತೇನೆ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**